**Akashvani: Bangalore**
**Regional Bulletin In Kannada**
**25.06.2026: 14.30hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**25.06.2026: 14.30hrs**

*********

**ಮುಖ್ಯಾಂಶಗಳು:**

1. ಮೂರು ರಾಜ್ಯಗಳ ಮುಖ್ಯಮಂತ್ರಿಗಳು ಹಾಗೂ ಕೇಂದ್ರ ಸಚಿವರ ಸಮ್ಮುಖದಲ್ಲಿ ತುಂಗಭದ್ರಾ ಜಲಾಶಯದ ೩೩ ಕ್ರಸ್ಟ್‌ಗೇಟ್‌ಗಳ ಲೋಕಾರ್ಪಣೆ
2. ಮಳೆಗಾಲದ ತುರ್ತು ಪರಿಸ್ಥಿತಿ, ಬರ ನಿರ್ವಹಣೆ ಹಿನ್ನೆಲೆ; ಸಚಿವರಿಗೆ ಜಿಲ್ಲಾ ಉಸ್ತುವಾರಿ ಹಂಚಿಕೆ ಮಾಡಿ ಮುಖ್ಯಮಂತ್ರಿ ಆದೇಶ
3. ಗೃಹ ಲಕ್ಷ್ಮಿ ಯೋಜನೆಯಡಿಯಲ್ಲಿ ೨೨೫ ಕೋಟಿ ರೂಪಾಯಿ ವಂಚನೆ; ಪ್ರತಿಪಕ್ಷ ನಾಯಕ ಆರ್. ಅಶೋಕ ಆರೋಪ
4. ಕೃಷಿ ಆಹಾರ ರಫ್ತು ಉತ್ತೇಜಿಸುವ ಹಿನ್ನೆಲೆ; ರಾಜ್ಯದ ನವೋದ್ಯಮ ಸಂಸ್ಥೆಗಳಿಂದ ರಾಗಿ, ಅಕ್ಕಿ, ಮಾವು ರಫ್ತು

***********

ಕೊಪ್ಪಳದ ಮುನಿರಾಬಾದ್‌ನಲ್ಲಿರುವ ಐತಿಹಾಸಿಕ ತುಂಗಭದ್ರಾ ಜಲಾಶಯದಲ್ಲಿ ನೂತನ ೧೮, ೧೯, ೨೦, ೨೧ನೇ ಕ್ರಸ್ಟ್‌ಗೇಟ್‌ಗಳನ್ನು ಇಂದು ಲೋಕಾರ್ಪಣೆಗೊಳಿಸಲಾಯಿತು.ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಆಂಧ್ರಪ್ರದೇಶದ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು, ತೆಲಂಗಾಣದ ಮುಖ್ಯಮಂತ್ರಿ ರೇವಂತ್ ರೆಡ್ಡಿ ಮತ್ತು ಕೇಂದ್ರ ಸಚಿವ ಸಿ.ಆರ್. ಪಾಟೀಲ್ ಜಂಟಿಯಾಗಿ ನೂತನ ಕ್ರಸ್ಟ್ ಗೇಟ್‌ಗಳ ಉದ್ಘಾಟನೆ ನೆರವೇರಿಸಿದರು. ಈ ಸಂದರ್ಭದಲ್ಲಿ, ತುಂಗಭದ್ರಾ ಜಲಾಶಯದ ಅಧಿಕಾರಿಗಳು ನೂತನ ಕ್ರಸ್ಟ್ ಗೇಟ್‌ಗಳ ಕುರಿತು ಸಮಗ್ರ ಮಾಹಿತಿ ನೀಡಿದರು. ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಆಂಧ್ರಪ್ರದೇಶ ಜಲಸಂಪನ್ಮೂಲ ಸಚಿವ ನಿಮ್ಮಲ ರಾಮನಾಯ್ಡು, ಆಂಧ್ರ ಪ್ರದೇಶ ಹಣಕಾಸು ಸಚಿವ ಪಯ್ಯವುಲ ಕೇಶವ್, ತೆಲಂಗಾಣ ಜಲಸಂಪನ್ಮೂಲ ಸಚಿವ ಉತ್ತಮ್ ಕುಮಾರ್ ರೆಡ್ಡಿ, ಮಾಜಿ ಸಚಿವರಾದ ಎಚ್ ಕೆ ಪಾಟೀಲ್, ಬೋಸರಾಜ್, ಶಿವರಾಜ್ ತಂಗಡಗಿ, ಮತ್ತಿತರರು ಉಪಸ್ಥಿತರಿದ್ದರು.

***********

ಮಳೆಗಾಲದ ತುರ್ತು ಪರಿಸ್ಥಿತಿ ಹಾಗೂ ಪ್ರವಾಹ ನಿರ್ವಹಣೆಗಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ರಾಜ್ಯದ ಸಚಿವರಿಗೆ ತಾತ್ಕಾಲಿಕ ಜಿಲ್ಲಾ ಉಸ್ತುವಾರಿ ಜವಾಬ್ದಾರಿ ಹಂಚಿಕೆ ಮಾಡಿದ್ದಾರೆ. ರಾಜ್ಯದ ಆಡಳಿತ ವ್ಯವಸ್ಥೆಯನ್ನು ಚುರುಕುಗೊಳಿಸುವ ಹಾಗೂ ಜಿಲ್ಲಾಮಟ್ಟದ ಅಭಿವೃದ್ಧಿ ಕಾಮಗಾರಿಗಳಿಗೆ ವೇಗ ನೀಡುವ ನಿಟ್ಟಿನಲ್ಲಿ ಮತ್ತು ಪ್ರಮುಖವಾಗಿ ಪ್ರಕೃತಿ ವಿಕೋಪದ ಸಂದರ್ಭದಲ್ಲಿ ಜಿಲ್ಲಾಡಳಿತದೊಂದಿಗೆ ಸಮನ್ವಯ ಸಾಧಿಸಲು ಮುಖ್ಯಮಂತ್ರಿ ಈ ನಿರ್ಧಾರ ಕೈಗೊಂಡಿದ್ದಾರೆ. ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರಿಗೆ ತುಮಕೂರು ಮತ್ತು ಚಿತ್ರದುರ್ಗ, ಸಚಿವ ಕೆ.ಎಚ್. ಮುನಿಯಪ್ಪ ಅವರಿಗೆ ಬೆಂಗಳೂರು ಗ್ರಾಮಾಂತರ, ಬಳ್ಳಾರಿ ಮತ್ತು ವಿಜಯನಗರ, ರಾಮಲಿಂಗಾರೆಡ್ಡಿ - ಬೆಂಗಳೂರು ದಕ್ಷಿಣ ಮತ್ತು ಮಂಡ್ಯ, ಎಂ.ಬಿ. ಪಾಟೀಲ್ - ವಿಜಯಪುರ ಮತ್ತು ಬಾಗಲಕೋಟೆ, ಕೆ.ಜೆ. ಜಾರ್ಜ್ - ಶಿವಮೊಗ್ಗ, ಚಿಕ್ಕಮಗಳೂರು ಮತ್ತು ದಾವಣಗೆರೆ, ಕೃಷ್ಣಬೈರೇಗೌಡ - ಬೆಂಗಳೂರು ನಗರ ಮತ್ತು ಹಾಸನ, ಈಶ್ವರ್ ಖಂಡ್ರೆ - ಬೀದರ್ ಮತ್ತು ಗದಗ, ಸತೀಶ್ ಜಾರಕಿಹೊಳಿ - ಬೆಳಗಾವಿ, ಧಾರವಾಡ ಮತ್ತು ಹಾವೇರಿ, ಪ್ರಿಯಾಂಕ್ ಖರ್ಗೆ - ಕಲಬುರಗಿ ಮತ್ತು ಯಾದಗಿರಿ, ಡಾ. ಶರಣಪ್ರಕಾಶ್ ಪಾಟೀಲ್ ಅವರಿಗೆ ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳ ತಾತ್ಕಾಲಿಕ ಉಸ್ತುವಾರಿ ನೀಡಲಾಗಿದೆ. ಸಚಿವ ಯು.ಟಿ. ಖಾದರ್ - ಉಡುಪಿ, ಕೊಡಗು, ದಕ್ಷಿಣ ಕನ್ನಡ ಮತ್ತು ಉತ್ತರ ಕನ್ನಡ, ಭೈರತಿ ಸುರೇಶ್ - ಕೋಲಾರ ಮತ್ತು ಚಿಕ್ಕಬಳ್ಳಾಪುರ, ಡಾ. ಯತೀಂದ್ರ ಸಿದ್ದರಾಮಯ್ಯ ಅವರಿಗೆ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳ ಉಸ್ತುವಾರಿ ನೀಡಿ ಸರ್ಕಾರ ಆದೇಶ ಹೊರಡಿಸಿದೆ.

***********

ರಾಜ್ಯದಲ್ಲಿ ಗೃಹಲಕ್ಷ್ಮಿ ಯೋಜನೆಯಡಿಯಲ್ಲಿ ೨೨೫ ಕೋಟಿ ರೂಪಾಯಿಗಳ ವಂಚನೆ ನಡೆದಿದೆ ಎಂದು ಪ್ರತಿ ಪಕ್ಷ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ. ಸಿಬಿಐ ಮತ್ತು ಕೇಂದ್ರ ಸೈಬರ್ ಅಪರಾಧ ಸಂಸ್ಥೆಗಳಿಂದ ತನಿಖೆ ನಡೆಸುವಂತೆ ಪತ್ರಿಕಾ ಪ್ರಕಟಣೆ ಮೂಲಕ ಆಗ್ರಹಿಸಿದ್ದಾರೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಈ ವಿಷಯದ ಮೌನ ವಹಿಸಿರುವುದನ್ನು ಪ್ರಶ್ನಿಸಿದ್ದಾರೆ. ಈ ವಂಚನೆಯನ್ನು ಸರ್ಕಾರಿ ಅಧಿಕಾರಿಗಳ ತಾಂತ್ರಿಕ ಲೋಪ ಎಂದು ತಳ್ಳಿ ಹಾಕಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ. ಎರಡು ವರ್ಷಗಳಲ್ಲಿ ಕೆಲವು ಫಲಾನುಭವಿಗಳ ಖಾತೆಗಳನ್ನು ಪದೇ ಪದೇ ಬದಲಾಯಿಸಲಾಗಿದೆ. ಕೆಲವು ಖಾತೆಗಳನ್ನು ಹಲವಾರು ತಿಂಗಳುಗಳ ಬಳಿಕ ಮತ್ತೆ ಸಕ್ರಿಯಗೊಳಿಸಲಾಗಿದೆ ಎಂದು ಆರೋಪಿಸಿದ್ದಾರೆ. ೨ ಲಕ್ಷ ೧೧ ಸಾವಿರ ಮೃತ ಫಲಾನುಭವಿಗಳಿಗೆ ಸಂಭವಿಸಿದ ದಾಖಲೆಗಳನ್ನು ಗುರುತಿಸಲಾಗಿದ್ದರೂ, ೭೭ ಸಾವಿರದ ೩೭೮

ಮೃತ ಫಲಾನುಭವಿಗಳಿಗೆ ಸಂಬಂಧಿಸಿದ ಡಿಜಿಟಲ್ ಡೇಟಾವನ್ನು ಬಹಿರಂಗಪಡಿಸಿಲ್ಲ ಎಂದು ದೂರಿದ್ದಾರೆ. ಈ ಕುರಿತಂತೆ ಸರ್ಕಾರ ವಿವರಣೆ ನೀಡುವಂತೆ ಒತ್ತಾಯಿಸಿದ್ದಾರೆ.

***********

ಪರಿಷತ್ ಚುನಾವಣೆಯಲ್ಲಿ ಬಿಜೆಪಿ ಶಾಸಕರು ಅಡ್ಡ ಮತದಾನ ಮಾಡಿದ್ದಕ್ಕೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಕಾರಣ ಎಂದು ಉಚ್ಚಾಟಿತ ಶಾಸಕ ಎಸ್.ಟಿ. ಸೋಮಶೇಖರ್ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಪಕ್ಷದೊಳಗಿನ ಆಂತರಿಕ ಭಿನ್ನಮತವೇ ಇದಕ್ಕೆ ಕಾರಣ ಎಂದು ಹೇಳಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಮತ್ತು ವಿರೋಧ ಪಕ್ಷದ ನಾಯಕ ಆರ್. ಅಶೋಕ ನಡುವಿನ ಆಂತರಿಕ ಪೈಪೋಟಿಯೂ ಅಡ್ಡ ಮತದಾನಕ್ಕೆ ಕಾರಣವಾಗಿದೆ ಎಂದು ತಿಳಿಸಿದ್ದಾರೆ. ವಿಜಯೇಂದ್ರ ಮತ್ತು ಅಶೋಕ ಅವರನ್ನು ತಮ್ಮ ಸ್ಥಾನಗಳಿಂದ ಕೆಳಗಿಳಿಯುವಂತೆ ಮಾಡುವ ಭಾಗವಾಗಿ ಅಡ್ಡ ಮತದಾನ ನಡೆದಿದೆ ಎಂದು ದೂರಿದ್ದಾರೆ.

***********

ಭಾರತದ ಕೃಷಿ ಆಹಾರ ರಫ್ತನ್ನು ಉತ್ತೇಜಿಸುವ ಕೃಷಿ ಮತ್ತು ಸಂಸ್ಕರಿಸಿದ ಆಹಾರ ಉತ್ಪನ್ನಗಳ ರಫ್ತು ಅಭಿವೃದ್ಧಿ ಪ್ರಾಧಿಕಾರ-ಅಫೇಡ, ವೇಗವರ್ಧನೆ ಕಾರ್ಯಕ್ರಮವನ್ನು ನೂರು ನವೋದ್ಯಮಗಳು ಪೂರ್ಣಗೊಳಿಸಿವೆ ಎಂದು ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ ಬಿಡುಗಡೆ ಮಾಡಿದ ಹೇಳಿಕೆಯಲ್ಲಿ ತಿಳಿಸಿದೆ. ನವೋದ್ಯಮ ಸಂಸ್ಥೆಯೊಂದು ಕರ್ನಾಟಕ ಮೂಲದ ರೈತ ಉತ್ಪಾದಕ ಸಂಸ್ಥೆಗಳಿಂದ ರಾಗಿಯನ್ನು ಬಳಸಿಕೊಂಡು ಪೌಷ್ಠಿಕಾಂಶಯುಕ್ತ ಹಾಗೂ ಗಿಡಮೂಲಿಕೆಗಳ ಸಾರವನ್ನು ಸೇರಿಸಿ, ಸಿದ್ಧಪಡಿಸಿದ ರಾಗಿ ಆಹಾರ ಉತ್ಪನ್ನಗಳನ್ನು ನ್ಯೂಜಿಲೆಂಡ್‌ಗೆ ಮೊದಲ ಬಾರಿಗೆ ರಫ್ತು ಮಾಡಿದೆ. ೧೨ ರಾಜ್ಯಗಳಲ್ಲಿ ಒಂದು ಸಾವಿರದ ೬೦೦ಕ್ಕೂ ಹೆಚ್ಚು ರೈತರಿಂದ ರಾಜ್ಯದ ನವೋದ್ಯಮ ಸಂಸ್ಥೆಯೊಂದು ದ್ವಿದಳ ಧಾನ್ಯಗಳು, ಪಾರಂಪರಿಕ ಧಾನ್ಯಗಳು ಮತ್ತು ಜಿಐ ಟ್ಯಾಗ್ ಮಾಡಲಾದ ಸ್ಥಳೀಯ ಅಕ್ಕಿ ಪ್ರಬೇಧಗಳು ಸೇರಿದಂತೆ ೪೦ ಮೆಟ್ರಿಕ್ ಟನ್ ಸಾವಯುವ ಉತ್ಪನ್ನಗಳನ್ನು ರಫ್ತು ಮಾಡಿದೆ. ರಾಜ್ಯದ ಅಫೇಡಾ ಮಾನ್ಯತೆ ಪಡೆದ ಪ್ಯಾಕ್ ಹೌಸ್‌ನಲ್ಲಿ ಸಂಸ್ಕರಿಸಿ, ಆಂಧ್ರ ಹಾಗೂ ಕರ್ನಾಟಕದ ಬೇಗಂಪಲ್ಲಿ ಮಾವಿನ ಹಣ್ಣನ್ನು ಸಿಂಗಾಪುರಕ್ಕೆ ರಫ್ತು ಮಾಡಲಾಗಿದೆ. ಕೃಷಿ ಆಹಾರ ರಫ್ತು ವಲಯಕ್ಕೆ ನವೀನ ಪರಿಹಾರಗಳನ್ನು ಅಭಿವೃದ್ಧಿಪಡಿಸುವ ನವೋದ್ಯಮಗಳಿಗೆ ಬೆಂಬಲ ನೀಡುವ ಹಿನ್ನೆಲೆಯಲ್ಲಿ ಅಫೇಡ, ಶೀಘ್ರದಲ್ಲೇ ಭಾರತಿ ಕಾರ್ಯಕ್ರಮದ ಮೂಲಕ ಮುಂದಿನ ಆವೃತ್ತಿಯನ್ನು ಪ್ರಾರಂಭಿಸಲಿದೆ ಎಂದು ತಿಳಿಸಿದೆ.

***********

ಡಿಜಿಟಲ್ ಬಂಧನ ಪ್ರಕರಣದಲ್ಲಿ ಕೇಂದ್ರೀಯ ತನಿಖಾ ದಳ - ಸಿಬಿಐ, ಆಪರೇಷನ್ ಚಕ್ರ - VI ಅಡಿಯಲ್ಲಿ ದೇಶಾದ್ಯಂತ ಇಂದು ದಾಳಿ ನಡೆಸಿದೆ. ಕರ್ನಾಟಕ, ಒಡಿಶಾ, ಪಂಜಾಬ್, ಗುಜರಾತ್, ಮಹಾರಾಷ್ಟ್ರ, ಹರಿಯಾಣ ಸೇರಿದಂತೆ ೧೯ ರಾಜ್ಯಗಳಲ್ಲಿ ೮೦ಕ್ಕೂ ಹೆಚ್ಚು ಪ್ರದೇಶಗಳಲ್ಲಿ ಶೋಧ ನಡೆಸಿದೆ. ಡಿಜಿಟಲ್ ಸಾಧನಗಳು, ಮೊಬೈಲ್ ಫೋನ್‌ಗಳು ಮತ್ತು ಬ್ಯಾಂಕ್ ವಹಿವಾಟು ದಾಖಲೆಗಳು ಸೇರಿದಂತೆ ಹಲವು ವಸ್ತುಗಳನ್ನು ಸಿಬಿಐ ಅಧಿಕಾರಿಗಳು ವಶಪಡಿಸಿಕೊಂಡಿದ್ದಾರೆ.

***********

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನೂತನ ಆಯುಕ್ತರಾಗಿ ಐಪಿಎಸ್ ಅಧಿಕಾರಿ ಎಂ.ಎನ್. ಅನುಚೇತ್ ಇಂದು ಅಧಿಕಾರ ಸ್ವೀಕರಿಸಿದ್ದಾರೆ. ಎಡಿಜಿಪಿ ಹೇಮಂತ್ ನಿಂಬಾಳ್ಕರ್, ಅನುಚೇತ್ ಅವರಿಗೆ ಅಧಿಕಾರ ಹಸ್ತಾಂತರಿಸಿದರು. ಈ ಸಂದರ್ಭದಲ್ಲಿ ಇಲಾಖೆಯ ಹಿರಿಯ ಅಧಿಕಾರಿಗಳು, ನೂತನ ಆಯುಕ್ತರಿಗೆ ಶುಭ ಕೋರಿದರು. ಅನುಚೇತ್ ಅವರಿಗೆ ವಾರ್ತಾ ಇಲಾಖೆಯ ಜೊತೆಗೆ ಯುವಜನ ಸೇವೆ ಹಾಗೂ ಕ್ರೀಡಾ ಇಲಾಖೆಯ ಆಯುಕ್ತರ ಹೆಚ್ಚುವರಿ ಪ್ರಭಾರ ಹುದ್ದೆಯನ್ನೂ ನೀಡಿ, ಸರ್ಕಾರ ಆದೇಶಿಸಿದೆ.

***********

ಐದು ವರ್ಷದೊಳಗಿನ ಯಾವುದೇ ಮಗು ಪೋಲಿಯೊ ಲಸಿಕೆಯಿಂದ ವಂಚಿತವಾಗದಂತೆ ಎಲ್ಲಾ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಯಾದಗಿರಿ ತಹಶೀಲ್ದಾರ್ ಸುರೇಶ ಅಂಕಲಗಿ ಸೂಚಿಸಿದ್ದಾರೆ. ದೇಶವು ಪೋಲಿಯೋ ಮುಕ್ತವಾಗಿದ್ದರೂ ಸಹ, ನೆರೆಹೊರೆಯ ದೇಶಗಳಲ್ಲಿ ಇನ್ನೂ ಪೋಲಿಯೋ ವೈರಸ್ ಇರುವುದರಿಂದ ಮುಂಜಾಗ್ರತಾ ಕ್ರಮವಾಗಿ ಇದೇ ಭಾನುವಾರದಂದು ಕೋಲಾರ ಜಿಲ್ಲೆಯಾದ್ಯಂತ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಜಿ. ಶ್ರೀನಿವಾಸ್ ತಿಳಿಸಿದ್ದಾರೆ. ರಾಜ್ಯದ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಅಂಗನವಾಡಿಗಳು ಹಾಗೂ ಸರ್ಕಾರಿ ಆಸ್ಪತ್ರೆಗಳ ಪೋಲಿಯೋ ಬೂತ್‌ಗಳಲ್ಲಿ ಲಸಿಕೆ ನೀಡಲಾಗುವುದು. ಅಂದು ಲಸಿಕೆಯಿಂದ ವಂಚಿತರಾಗುವ ಮಕ್ಕಳಿಗಾಗಿ ಸೋಮವಾರ ಮತ್ತು ಮಂಗಳವಾರ ಸಿಬ್ಬಂದಿ ಮನೆ ಮನೆಗೆ ಭೇಟಿ ನೀಡಿ ಲಸಿಕೆ ಹಾಕಲಿದ್ದಾರೆ.

***********

ಪರಿಶಿಷ್ಟಜಾತಿ ಹಾಗೂ ಪರಿಶಿಷ್ಟ ಪಂಗಡದ ಜನರ ಮೇಲಿನ ದೌರ್ಜನ್ಯ ಪ್ರಕರಣಗಳನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿ, ತನಿಖೆಗಳನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸಂಗಪ್ಪ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಜಿಲ್ಲಾ ಮಟ್ಟದ ಜಾಗೃತಿ, ನಿಯಂತ್ರಣ ಹಾಗೂ ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಜಿಲ್ಲೆಯಲ್ಲಿನ ಒಟ್ಟು ೧೯೬ ದೌರ್ಜನ್ಯ ಪ್ರಕರಣಗಳ ಪೈಕಿ ೪೬ ಪ್ರಕರಣಗಳು ಬಿಡುಗಡೆಯಾಗಿದ್ದು, ೧೯ ಪ್ರಕರಣಗಳಲ್ಲಿ ಶಿಕ್ಷೆ ವಿಧಿಸಲಾಗಿದೆ. ೮೩ ಪ್ರಕರಣಗಳು ವಿಲೇವಾರಿಯಾಗಿದ್ದು, ಇನ್ನೂ ೧೧೩ ಪ್ರಕರಣಗಳು ನ್ಯಾಯಾಲಯದಲ್ಲಿ ಬಾಕಿ ಉಳಿದಿವೆ ಎಂದು ಮಾಹಿತಿ ನೀಡಿದ್ದಾರೆ. ೨೦೨೫-೨೬ನೇ ಸಾಲಿನಲ್ಲಿ ೭೩ ಹಾಗೂ ೨೦೨೬-೨೭ನೇ ಸಾಲಿನಲ್ಲಿ ೨೫ ದೌರ್ಜನ್ಯ ಪ್ರಕರಣಗಳು ದಾಖಲಾಗಿವೆ. ದೌರ್ಜನ್ಯ ಸಂತ್ರಸ್ತರಿಗೆ ಕಳೆದ ಸಾಲಿನಲ್ಲಿ ಒಟ್ಟು ೧ಕೋಟಿ ೨೮ ಲಕ್ಷ ರೂಪಾಯಿ ಪರಿಹಾರ ವಿತರಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

*****END******